## ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 149 (208) |
| ಮಾನ್ಯ ಸದಸ್ಯರ ಹೆಸರು : | ಶ್ರೀ ಬಿ.ಎಂ. ಫಾರೂಖ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ : | 14.02.2023 |
| ಉತ್ತರಿಸುವವರು : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರಿನ ಉಳ್ಳಾಲ ನಗರ ಸಭಾ ವ್ಯಾಪ್ತಿಯಲ್ಲಿ ಕಸ, ತ್ಯಾಜ್ಯವನ್ನು ಎಲ್ಲೆಂದರಲ್ಲಿ ಸುರಿಯುತ್ತಿದ್ದು, ಇದರಿಂದ ಗಂಭೀರ ಸಮಸ್ಯೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ದಕ್ಷಿಣ ಕನ್ನಡ ಜಿಲ್ಲೆಯ ಉಳ್ಳಾಲ ನಗರಸಭೆ ವ್ಯಾಪ್ತಿಯಲ್ಲಿ ದಿನನಿತ್ಯ 18.5 ಟನ್ ಘನತ್ಯಾಜ್ಯ ಉತ್ಪಾದನೆಯಾಗುತ್ತಿದ್ದು, (ಈ ಪೈಕಿ 10 ಟನ್ ಹಸಿಕಸ, 8 ಟನ್ ಒಣಕಸ) ಸದರಿ ತ್ಯಾಜ್ಯವನ್ನು ಮೂಲದಲ್ಲಿಯೆ ವಿಂಗಡಿಸಿ ನಗರಸಭೆಯ ವಾಹನಗಳಲ್ಲಿ ಸಂಗ್ರಹಿಸಲಾಗುತ್ತಿದೆ. ನಗರಸಭೆ ವ್ಯಾಪ್ತಿಯಲ್ಲಿ ತ್ಯಾಜ್ಯ ವಿಲೇವಾರಿ ಘಟಕ ಲಭ್ಯವಿಲ್ಲದೆಯಿರುವುದರಿಂದ 8.5 ಟನ್ ಹಸಿಕಸವನ್ನು ಮಂಗಳೂರು ಮಹಾನಗರ ಪಾಲಿಕೆಯ ತ್ಯಾಜ್ಯ ವಿಲೇವಾರಿ ಘಟಕ್ಕೆ ಸಾಗಿಸಲಾಗುತ್ತಿದ್ದು, ಇನ್ನು ಉಳಿದಂತೆ ಹಸಿತ್ಯಾಜ್ಯವನ್ನು ನಗರಸಭೆ ಆವರಣದಲ್ಲಿರುವ Organic waste converter ಮತ್ತು mesh composting ಮೂಲಕ ಗೊಬ್ಬರ ತಯಾರಿಸಲಾಗತ್ತಿದ್ದು, ಒಣಕಸವನ್ನು ನಗರಸಭೆಯ Dry waste collection centre ನಲ್ಲಿ ಸಂಗ್ರಹಿಸಲಾಗುತ್ತಿದೆ. |
| ಆ) | ಹಾಗಿದ್ದಲ್ಲಿ, ಉಳ್ಳಾಲ ನಗರ ಸಭಾ ವ್ಯಾಪ್ತಿಯಲ್ಲಿ ಅಬ್ಬಕ್ಕ ಸರ್ಕಲ್ ಬಳಿ, ಉಳ್ಳಾಲ ಬೀಚ್ ಸುತ್ತಮುತ್ತ ನಗರ ಸಭೆಯ ತ್ಯಾಜ್ಯ ಸುರಿಯುತ್ತಿದ್ದು, ಸಾರ್ವಜನಿಕರಿಗೆ, ಪ್ರವಾಸಿಗರಿಗೆ ತೀವ್ರತೊಂದರೆಯಾಗುತ್ತಿದ್ದು, (ಆರೋಗ್ಯ ಸಮಸ್ಯೆಯು ಸೇರಿ) ಇದರ ನಿವಾರಣೆಗೆ ಸರ್ಕಾರವು ಯಾವ ರೀತಿಯ ಸೂಕ್ತ ಕ್ರಮಗಳನ್ನು ಕೈಗೊಳ್ಳಲಿದೆ; | ಉಳ್ಳಾಲ ನಗರಸಭೆ ವ್ಯಾಪ್ತಿಯಲ್ಲಿ ಮನೆ-ಮನೆಗಳಿಂದ ಹಾಗೂ ವಾಣಿಜ್ಯ ಕಟ್ಟಡಗಳಿಂದ ದಿನನಿತ್ಯ ಉತ್ಪಾದನೆಯಾಗುವ ತ್ಯಾಜ್ಯಗಳನ್ನು ನಗರಸಭೆ ತ್ಯಾಜ್ಯ ಸಂಗ್ರಹಣಾ ವಾಹನಗಳಾದ ಆಟೋಟಿಪ್ಪರ್ ಮತ್ತು ಕಾಂಪಾಕ್ಟರ್‌ಗಳಲ್ಲಿ ಸಂಗ್ರಹಿಸಿ ಮಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ ತ್ಯಾಜ್ಯ ವಿಲೇವಾರಿ ಘಟಕ್ಕೆ ಸಾಗಿಸಲಾಗುತ್ತಿದ್ದು, ನಗರಸಭೆಯ ಸುತ್ತಮುತ್ತ ಯಾವುದೇ ತ್ಯಾಜ್ಯವನ್ನು ಸುರಿಯುತ್ತಿಲ್ಲವೆಂದು ಮತ್ತು ಸಾರ್ವಜನಿಕರಿಗೆ, ಪ್ರವಾಸಿಗರಿಗೆ ಯಾವುದೇ ರೀತಿಯ ಆರೋಗ್ಯ ಸಮಸ್ಯೆ ಆಗದಂತೆ ದಿನನಿತ್ಯ ಕ್ರಿಮಿನಾಶಕಗಳನ್ನು ಸಿಂಪಡಿಸಿ ಶುಚಿಗೊಳಿಸಲಾಗುತ್ತಿದೆ. |
| ಇ) | ಸದರಿ ಸಮಸ್ಯೆ ನಿವಾರಣೆಗೆ ಒಂದು ಶಾಶ್ವತ ಪರಿಹಾರಕ್ಕಾಗಿ ಡಂಪಿಂಗ್ ಯಾರ್ಡ್ ಗುರುತಿಸಿ, ಸೂಕ್ತ ಪರಿಹಾರ ಮಾರ್ಗಗಳನ್ನು ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು) | ಉಳ್ಳಾಲ ನಗರಸಭೆ ವ್ಯಾಪ್ತಿಯಲ್ಲಿ ಪ್ರತಿದಿನ ಉತ್ಪಾದನೆಯಾಗುವ ತ್ಯಾಜ್ಯಗಳನ್ನು ವೈಜ್ಞಾನಿಕವಾಗಿ ನಿರ್ವಹಣೆ ಮಾಡಲು ತ್ಯಾಜ್ಯ ವಿಲೇವಾರಿ ಘಟಕ ಸ್ಥಾಪಿಸುವುದು ಅವಶ್ಯವಾಗಿದ್ದು, ಈ ನಿಟ್ಟಿನಲ್ಲಿ ಉಳ್ಳಾಲ ನಗರಸಭೆಯು ಕಂದಾಯ ಇಲಾಖೆಗೆ ಪತ್ರ ಬರೆದಿದ್ದು, ಉಳ್ಳಾಲ ತಾಲ್ಲೂಕಿನ ಸಜಿಪನಡು ಗ್ರಾಮದ ಸರ್ವೆ ನಂ 110/1, 109/1 ರಲ್ಲಿ ಲಭ್ಯವಿರುವ ಸರ್ಕಾರಿ ಜಾಗವನ್ನು ತ್ಯಾಜ್ಯ ವಿಲೇವಾರಿ ಘಟಕ ಸ್ಥಾಪಿಸಲು ಕಾಯ್ದಿಸುವ ಪ್ರಕ್ರಿಯೆಯು ಪರಿಶೀಲನಾ ಹಂತದಲ್ಲಿರುತ್ತದೆ. |

ಸಂಖ್ಯೆ: ನಅಇ 24 ಜಿಇಎಲ್ 2023 (ಇ)

(ಎನ್.ನಾಗರಾಜ್ (ಎಂ.ಟಿ.ಬಿ))
ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ
ಸಾರ್ವಜನಿಕ ವಲಯ ಉದ್ಯಮಗಳ ಸಚಿವರು.